# ರಾಜ್ಯಸಭೆ: 10 ರಾಜ್ಯಗಳಿಂದ 37 ಅಭ್ಯರ್ಥಿಗಳ ಅವಿರೋಧ ಆಯ್ಕೆ

ದೆಹಲಿ: ವಿಧಾನಸಭೆಗಳಿಂದ ರಾಜ್ಯಸಭೆಯ 55 ಸ್ಥಾನಗಳಿಗೆ ಮಾರ್ಚ್ 26ರಂದು ಚುನಾವಣೆ ನಡೆಯಲಿದೆ. ಹತ್ತು ರಾಜ್ಯಗಳಿಂದ 37 ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದು, 7 ರಾಜ್ಯಗಳಿಂದ 18 ಸದಸ್ಯರ ಆಯ್ಕೆಗಾಗಿ ಮಾರ್ಚ್ 26ರಂದು ಚುನಾವಣೆ ನಡೆಯಲಿದೆ.

ರಾಜಸ್ಥಾನ, ಮಧ್ಯಪ್ರದೇಶ, ಗುಜರಾತ್, ಜಾರ್ಖಂಡ್, ಆಂಧ್ರ ಪ್ರದೇಶ, ಮೇಘಾಲಯ ಮತ್ತು ಮಣಿಪುರದಲ್ಲಿ ಚುನಾವಣೆ ನಡೆಯಲಿದೆ. ಮಹಾರಾಷ್ಟ್ರ, ಪಶ್ಚಿಮ ಬಂಗಾಳ, ಅಸ್ಸಾಂ, ತಮಿಳುನಾಡು, ಬಿಹಾರ, ತೆಲಂಗಾಣ, ಹರಿಯಾಣ, ಛತ್ತೀಸ್‌ಗಢ, ಒಡಿಶಾ ಮತ್ತು ಹಿಮಾಚಲ ಪ್ರದೇಶದಲ್ಲಿ ಚುನಾವಣೆ ನಡೆಯದೆ ಅಭ್ಯರ್ಥಿಗಳು ಅವಿರೋಧವಾಗಿ ರಾಜ್ಯಸಭೆಗೆ ಆಯ್ಕೆಯಾಗಿದ್ದಾರೆ.

ರಾಜಸ್ಥಾನದ 3 ಸ್ಥಾನಗಳಿಗೆ ಚುನಾವಣೆ ನಡೆಯಲಿದ್ದು, ಬಿಜೆಪಿ ಹಾಗೂ ಕಾಂಗ್ರೆಸ್ ಎರಡೂ ಪಕ್ಷಗಳು ತಲಾ ಇಬ್ಬರು ಅಭ್ಯರ್ಥಿಗಳನ್ನು ನಿಲ್ಲಿಸಿರುವುದರಿಂದ ಚುನಾವಣೆ ನಡೆಯಲಿದೆ. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಆಯ್ಕೆ ಬಹುತೇಕ ಖಚಿತವಾಗಿದೆ.

ಗುಜರಾತ್‌ನ 4 ಸ್ಥಾನಗಳಿಗೆ ಚುನಾವಣೆ ನಡೆಯಲಿದ್ದು, ಬಿಜೆಪಿ 3, ಕಾಂಗ್ರೆಸ್ 1 ಸ್ಥಾನ ಗೆಲ್ಲಲಿದೆ. ಕಾಂಗ್ರೆಸ್‌ನ ಐವರು ಶಾಸಕರ ರಾಜೀನಾಮೆಯಿಂದ ಬಿಜೆಪಿಯ ಮೂರನೇ ಅಭ್ಯರ್ಥಿ ಗೆಲುವು ಸುಲಭವಾಗಲಿದೆ. ಕಾಂಗ್ರೆಸ್ 2ನೇ ಅಭ್ಯರ್ಥಿ ನಿಲ್ಲಿಸಿರುವುದರಿಂದ ಚುನಾವಣೆ ನಡೆಯಲಿದೆ.

ಮಧ್ಯಪ್ರದೇಶದ 3 ಸ್ಥಾನಗಳಿಗೆ ಚುನಾವಣೆ ನಡೆಯಲಿದ್ದು, ಕಾಂಗ್ರೆಸ್‌ನ 22 ಶಾಸಕರ ರಾಜೀನಾಮೆಯಿಂದಾಗಿ ಬಿಜೆಪಿ 2 ಮತ್ತು ಕಾಂಗ್ರೆಸ್ ಒಂದು ಸ್ಥಾನ ಗೆಲ್ಲುವುದು ಖಚಿತ. ರಾಜಕೀಯ ಬೆಳವಣಿಗೆ ನಡೆಯದಿದ್ದರೆ ಪರಿಸ್ಥಿತಿ ತಿರುವುಮುರುವಾಗುತ್ತಿತ್ತು. ಕಾಂಗ್ರೆಸ್ 2ನೇ ಅಭ್ಯರ್ಥಿಯನ್ನು ಕಣಕ್ಕೆ ಇಳಿಸಿದ್ದರಿಂದ ಇಲ್ಲಿ ಚುನಾವಣೆ ನಡೆಯುತ್ತಿದೆ. ಬಿಜೆಪಿಯಿಂದ ಜ್ಯೋತಿರಾದಿತ್ಯ ಸಿಂಧಿಯಾ ಕಣದಲ್ಲಿರುವ ಪ್ರಮುಖರು.

ಆಂಧ್ರಪ್ರದೇಶದ 4 ಸ್ಥಾನಗಳಿಗೆ ಚುನಾವಣೆಯು ನಡೆಯಲಿದ್ದು, ಆಡಳಿತಾರೂಢ ವೈಎಸ್‌ಆರ್ ಕಾಂಗ್ರೆಸ್ ಪಕ್ಷವು ನಾಲ್ಕೂ ಸ್ಥಾನಗಳನ್ನು ನಿರಾಯಾಸವಾಗಿ ಗೆದ್ದುಕೊಳ್ಳಲಿದೆ. ಸಂಖ್ಯಾಬಲ ಇಲ್ಲದಿದ್ದರೂ ಟಿಡಿಪಿ ಅಭ್ಯರ್ಥಿಯನ್ನು ಕಣಕ್ಕೆ ಇಳಿಸಿದ್ದರಿಂದ ಚುನಾವಣೆ ನಡೆಯಲಿದೆ.

ಜಾರ್ಖಂಡ್ 2 ಸ್ಥಾನಗಳಿಗೆ ಚುನಾವಣೆ ನಡೆಯಲಿದ್ದು, ಜೆಎಂಎಂ ಮುಖ್ಯಸ್ಥ ಶಿಬು ಸೊರೇನ್ ಆಯ್ಕೆ ಖಚಿತವಾಗಿದೆ. ಇನ್ನೊಂದು ಸ್ಥಾನಕ್ಕಾಗಿ ಬಿಜೆಪಿ, ಕಾಂಗ್ರೆಸ್ ಮಧ್ಯೆ ಸ್ಪರ್ಧೆ ಏರ್ಪಟ್ಟಿದೆ. ಮಣಿಪುರ, ಮೇಘಾಲಯಗಳ ತಲಾ ಒಂದು ಸ್ಥಾನಗಳಿಗೂ ಚುನಾವಣೆ ನಡೆಯಲಿದ್ದು, ಇದು ಬಿಜೆಪಿ ಪಾಲಾಗಲಿದೆ.